For more job news visit : www.kpscvaani.com

ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ನಗರಾಭಿವೃದ್ಧಿ ಕೋಶ ವಿಜಯಪುರ-586101

DC Office, District Urban Development Cell, Vijayapura-586101
Ph :08352-259855 E-mail: ka.vijapura.dudc@gmail.com
Office Website: www.vijayapuradudc.mrc.gov.in

ಕ್ರ: ಜಿನಕೋ-1/ಸಿಬ್ಬಂದಿ/ಪೌಕಾನೇಪಾ/2025-26 **ದಿನಾಂಕ:06-06-2026**

: ಅಧಿಸೂಚನೆ :

ವಿಷಯ: ವಿಜಯಪುರ ಮಹಾನಗರ ಪಾಲಿಕೆಯಲ್ಲಿ ನೇರ ಪಾವತಿಯಡಿ ಖಾಲಿ ಇರುವ ಪೌರಕಾರ್ಮಿಕ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಪತ್ರ ಸಂಖ್ಯೆ:ನಅಇ/108/GEL/2021(ಇ) ದಿ:07-08-2025 ಹಾಗೂ 12-11-2025.

2) ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಇವರ ಸುತ್ತೋಲೆ ಸಂಖ್ಯೆ:513641/DMA/EST2/OTH/8/2021 ದಿನಾಂಕ:18-11-2025.

=o**o=

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪೌರಸೇವಾ ವೃಂದ & ನೇಮಕಾತಿ ನಿಯಮ-2010 ಮತ್ತು ಮಹಾನಗರ ಪಾಲಿಕೆಗಳ ವೃಂದ & ನೇಮಕಾತಿ ನಿಯಮ-2011ರ ರೀತ್ಯಾ ಮಹಾನಗರ ಪಾಲಿಕೆ & ನಗರಸಭೆಗಳಲ್ಲಿ ಶೇ.50ರಷ್ಟು ಪೌರಕಾರ್ಮಿಕರನ್ನು ನೇರ ನೇಮಕಾತಿ ಮೂಲಕ ಹಾಗೂ ಶೇ.50 ರಷ್ಟು ಪೌರಕಾರ್ಮಿಕರನ್ನು ನೇರಪಾವತಿ ಮೂಲಕ ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ(1)ರ ಪತ್ರ ಮತ್ತು ಉಲ್ಲೇಖ(2)ರ ಸುತ್ತೋಲೆಗಳಂತೆ ಮಾರ್ಗಸೂಚಿಗಳನ್ನು ಅನುಸರಿಸಿ ಮಹಾನಗರ ಪಾಲಿಕೆ ಮತ್ತು ನಗರಸಭೆಯಲ್ಲಿ ನೇರ ಪಾವತಿಯಡಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯ ಮೂಲಕ ಕ್ರಮವಹಿಸಲು ಸೂಚಿಸಲಾಗಿರುತ್ತದೆ.

ಅದರಂತೆ ವಿಜಯಪುರ ಮಹಾನಗರ ಪಾಲಿಕೆಯಲ್ಲಿ ನೇರಪಾವತಿಯಡಿ ಖಾಲಿ ಇರುವ ಈ ಕೆಳಕಾಣಿಸಿದ ಪೌರಕಾರ್ಮಿಕ ಹುದ್ದೆಗಳನ್ನು ಭರ್ತಿ ಮಾಡಲು, ಅರ್ಹ ಅಭ್ಯರ್ಥಿಗಳಿಂದ ನಿಗಧಿತ ನಮೂನೆಯಲ್ಲಿ ದಾಖಲಾತಿಗಳೊಂದಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕ್ರ.ಸಂ	ನಗರ ಸ್ಥಳೀಯ ಸಂಸ್ಥೆಯ ಹೆಸರು	ಪೌರಕಾರ್ಮಿಕರ ನೇರ ಪಾವತಿಗಾಗಿ ಪರಿಗಣಿಸಿದ ಒಟ್ಟು ಹುದ್ದೆಗಳ ಸಂಖ್ಯೆ
01	ವಿಜಯಪುರ ಮಹಾನಗರ ಪಾಲಿಕೆ	**118**

1. ಅರ್ಜಿ ಸಲ್ಲಿಕೆ ವಿಧಾನ ಮತ್ತು ಸ್ವೀಕೃತಿ ಕಾಲಮಿತಿ:

ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ:	**10-06-2026**
(ದೃಢೀಕರಿಸಿದ ದಾಖಲೆಗಳೊಂದಿಗೆ) ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:	**15-07-2026**
ನಿಗದಿತ ನಮೂನೆ ಪಡೆಯುವ ಹಾಗೂ ಭರ್ತಿ ಮಾಡಿದ ನಮೂನೆ ಮತ್ತು ಅವಶ್ಯಕ ದಾಖಲೆಗಳು ಲಗತ್ತಿಸಿ ನೀಡುವ ಸ್ಥಳ.	**ವಿಜಯಪುರ ಮಹಾನಗರ ಪಾಲಿಕೆ ಕೇಂದ್ರ ಕಚೇರಿ.**

For more job news visit : www.kpscvaani.com

ಅರ್ಜಿ ಶುಲ್ಕ	ರೂ.100/-
ಸೂಚನೆ: ಮಹಾನಗರ ಪಾಲಿಕೆಯಲ್ಲಿ ಅರ್ಜಿ ಶುಲ್ಕ ಪಾವತಿಸಿ ರಶೀದಿ ಪಡೆಯತಕ್ಕದ್ದು.	

I. ಅಧಿಸೂಚನೆಯನ್ನು ಮಹಾನಗರ ಪಾಲಿಕೆಯ www.vijayapuracity.mrc.gov.in ಅಥವಾ ಸೂಚನಾ ಫಲಕದಲ್ಲಿ ಹಾಗೂ ಜಿಲ್ಲಾ ನಗರಾಭಿವೃದ್ಧಿ ಕೋಶದ ವೆಬ್‌ಸೈಟ್ www.vijayapuradudc.mrc.gov.in ನಲ್ಲಿ ವೀಕ್ಷಿಸಬಹದು ಹಾಗೂ ಹೆಚ್ಚಿನ ಮಾಹಿತಿ ಹಾಗೂ ಅರ್ಜಿ ನಮೂನೆಗಾಗಿ ವಿಜಯಪುರ ಮಹಾನಗರ ಪಾಲಿಕೆಯ ಕೇಂದ್ರ ಕಚೇರಿ ವೇಳೆಯಲ್ಲಿ ಸಂಪರ್ಕಿಸುವುದು.

II. ಯಾವುದೇ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಬಾರಿ ಅರ್ಜಿ ಸಲ್ಲಿಸಿದಲ್ಲಿ, ಒಂದು ಅರ್ಜಿಯನ್ನು ಪರಿಗಣಿಸಿ ಉಳಿದಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು,

III. ಅರ್ಜಿಗಳನ್ನು ನಿಗಧಿತ ನಮೂನೆಯಲ್ಲಿ ಖುದ್ದಾಗಿ ವಿಜಯಪುರ ಮಹಾನಗರ ಪಾಲಿಕೆ ಕಛೇರಿಯಲ್ಲಿ ಮಾತ್ರ ಸಲ್ಲಿಸ ತಕ್ಕದ್ದು, ಅಂಚೇ ಮೂಲಕ/ನೇರವಾಗಿ ಜಿಲ್ಲಾಧಿಕಾರಿಗಳು/ಯೋಜನಾ ನಿರ್ದೇಶಕರ ಕಾರ್ಯಾಲಯಕ್ಕೆ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸುವುದಿಲ್ಲ. ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಪ್ರಕಟಣೆಯಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿ ಕೊಳ್ಳತಕ್ಕದ್ದು & ನೀಡಿರುವ ಸೂಚನೆಗಳನ್ವಯವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅಂತಹವರ ವಿರುದ್ಧ ಕಾನೂನಿನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

2. ಅರ್ಹತಾ ಷರತ್ತುಗಳು:

I. ಭಾರತೀಯ ನಾಗರೀಕನಾಗಿರತಕ್ಕದ್ದು.

II. ಈ ಸಾರ್ವಜನಿಕ ಪ್ರಕಟಣೆ ಪ್ರಕಟಗೊಂಡ ದಿನಾಂಕಕ್ಕೆ ಕನಿಷ್ಠ ವಯೋಮಿತಿ 18 ಗರಿಷ್ಠ ವಯೋಮಿತಿ 50 ವರ್ಷಗಳನ್ನು ಮೀರಿರಬಾರದು.

III. ವಿಜಯಪುರ ಮಹಾನಗರ ಪಾಲಿಕೆಯಲ್ಲಿ ಈ ಹಿಂದೆ ಹೊರಗುತ್ತಿಗೆ/ದಿನಗೂಲಿ/ಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಪೌರಕಾರ್ಮಿಕ, ಲೋಡರ್ಸ್, ಯುಜಿಡಿ ಹೆಲ್ಪರ್ಸ್, ಕ್ಲೀನರ್ಸ್ ಹಾಗೂ ಹೆಲ್ಪರ್ಸ್‌ಗಳಾಗಿ ಕಾರ್ಯನಿರ್ವಹಿಸುತ್ತಿರುವ/ಕಾರ್ಯ ನಿರ್ವಹಿಸಿದ ಅಭ್ಯರ್ಥಿಗಳು.

IV. ಪಾಲಿಕೆಯಲ್ಲಿ ಹೊರಗುತ್ತಿಗೆ/ದಿನಗೂಲಿ/ಗುತ್ತಿಗೆ ಆಧಾರದ ಮೇಲೆ ಪೌರಕಾರ್ಮಿಕರಾಗಿ ಕಾರ್ಯ ನಿರ್ವಹಿಸುವಾಗ ಕೋವಿಡ್-19ರ ಸಾಂಕ್ರಾಮಿಕ ರೋಗಕ್ಕೆ ತುತ್ತಾಗಿ ಅಥವಾ ಇತರೆ ಕಾರಣಗಳಿಂದ ಮರಣ ಹೊಂದಿದ ಪೌರಕಾರ್ಮಿಕರ ಕುಟುಂಬದ ಒಬ್ಬ ಸದಸ್ಯರಿಗೆ ಆದ್ಯತೆ ನೀಡಲಾಗುವುದು.

V. ಪಾಲಿಕೆಯಲ್ಲಿ ತ್ಯಾಜ್ಯ ಸಂಸ್ಕರಣ ಘಟಕ, ಸಾರ್ವಜನಿಕ ಶೌಚಾಲಯ, ಶೂನ್ಯ ತ್ಯಾಜ್ಯ ನಿರ್ವಹಣೆ ಘಟಕದಲ್ಲಿ ಕಾರ್ಯನಿರ್ವಹಿಸಿ ಅನುಭವವುಳ್ಳ ಸ್ಥಳೀಯ ಸ್ವಚ್ಛತಾ ಕೆಲಸಗಾರರು.

VI. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ Manual Scavengers ಅಧಿನಿಯಮದಡಿ ಗುರುತಿಸಲ್ಪಟ್ಟ ಸಂತ್ರಸ್ಥರುಗಳಿಗೆ ಅಥವಾ ಅವರ ಕುಟುಂಬದ ಒಬ್ಬ ಸದಸ್ಯರಿಗೆ.

VII. ಮಹಾನಗರ ಪಾಲಿಕೆಯಲ್ಲಿ ಕನಿಷ್ಠ 01 ವರ್ಷಕ್ಕಿಂತ ಕಡಿಮೆಯಿಲ್ಲದೇ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ & ಈ ನಿಯಮಗಳ ಪ್ರಾರಂಭದ ದಿನಾಂಕ ದಿಂದಲೂ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಆದ್ಯತೆ

VIII. ವಿದ್ಯಾರ್ಹತೆ ಅನ್ವಯಿಸುವುದಿಲ್ಲ.

For more job news visit : www.kpscvaani.com

IX. ಮೀಸಲಾತಿ ಅನ್ವಯಿಸುವುದಿಲ್ಲ.

X. ಕನ್ನಡ ಮಾತನಾಡಲು ಗೊತ್ತಿರಬೇಕು.

XI. ಮೇಲಿನ ಹುದ್ದೆಗಳಲ್ಲಿ ಕೆಲಸ ನಿರ್ವಹಿಸಿದ ಬಗ್ಗೆ ವೇತನ, ESI, EPF ಗಳ ಬ್ಯಾಂಕ್ ಸ್ಟೇಟಮೆಂಟ್/ಹಾಜರಾತಿ ಪತ್ರಗಳು ಲಗತ್ತಿಸುವುದು.

XII. ಸಕ್ಷಮ ಪ್ರಾಧಿಕಾರದಿಂದ ಪಡೆದ ಸೇವಾ ಪ್ರಮಾಣ ಪತ್ರ ಲಗತ್ತಿಸುವುದು

XIII. ಯಾವುದೇ ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿರಬಾರದು.

XIV. ಈಗಾಗಲೇ ಯಾವುದೇ ಕಚೇರಿಯಲ್ಲಿ ಶಿಸ್ತು ಕ್ರಮಕ್ಕೆ ಒಳಗಾಗಿ ಸೇವೆಯಿಂದ ವಜಾಗೊಂಡಿರಬಾರದು.

3. ನೇಮಕಾತಿ ವಿಧಾನ:

I. ಈ ಸಾರ್ವಜನಿಕ ಪ್ರಕಟಣೆ ಪ್ರಕಟಗೊಂಡ ಪ್ರಾರಂಭದ ದಿನಾಂಕಕ್ಕೆ ಮುಂಚೆ ಮಹಾನಗರ ಪಾಲಿಕೆಯಲ್ಲಿ ಈ ಹಿಂದೆ ಹೊರಗುತ್ತಿಗೆ/ದಿನಗೂಲಿ/ಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಪೌರಕಾರ್ಮಿಕ, ಲೋಡರ್ಸ್, ಯುಜಿಡಿ ಹೆಲ್ಪರ್ಸ್, ಕ್ಲೀನರ್ಸ್ ಹಾಗೂ ಹೆಲ್ಪರ್ಸ್‌ಗಳಾಗಿ ಕಾರ್ಯನಿರ್ವಹಿಸುತ್ತಿರುವ/ಕಾರ್ಯನಿರ್ವಹಿಸಿದ ಅಭ್ಯರ್ಥಿಗಳಿಗೆ ಪ್ರಥಮ ಆದ್ಯತೆ ನೀಡಲಾಗುವುದು.

II. ಪಾಲಿಕೆಯಲ್ಲಿ ಹೊರಗುತ್ತಿಗೆ/ದಿನಗೂಲಿ/ಗುತ್ತಿಗೆ ಆಧಾರದ ಮೇಲೆ ಪೌರಕಾರ್ಮಿಕರಾಗಿ ಕಾರ್ಯ ನಿರ್ವಹಿಸುವಾಗ ಕೋವಿಡ್-19ರ ಸಾಂಕ್ರಾಮಿಕ ರೋಗಕ್ಕೆ ತುತ್ತಾಗಿ ಅಥವಾ ಇತರೆ ಕಾರಣಗಳಿಂದ ಮರಣ ಹೊಂದಿದ ಪೌರಕಾರ್ಮಿಕರ ಕುಟುಂಬದ ಒಬ್ಬ ಸದಸ್ಯರಿಗೆ ಆದ್ಯತೆ ನೀಡಲಾಗುವುದು.

III. ಪಾಲಿಕೆಯಲ್ಲಿ ತ್ಯಾಜ್ಯ ಸಂಸ್ಕರಣ ಘಟಕ, ಸಾರ್ವಜನಿಕ ಶೌಚಾಲಯ, ಶೂನ್ಯ ತ್ಯಾಜ್ಯ ನಿರ್ವಹಣೆ ಘಟಕದಲ್ಲಿ ಕಾರ್ಯನಿರ್ವಹಿಸಿ ಅನುಭವವುಳ್ಳ ಸ್ಥಳೀಯ ಸ್ವಚ್ಛತಾ ಕೆಲಸ ಗಾರರು.

IV. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ Manual Scavengers ಅಧಿನಿಯಮದಡಿ ಗುರುತಿಸಲ್ಪಟ್ಟ ಸಂತ್ರಸ್ಥರುಗಳಿಗೆ ಅಥವಾ ಅವರ ಕುಟುಂಬದ ಒಬ್ಬ ಸದಸ್ಯರಿಗೆ (ಗಂಡ/ಹೆಂಡತಿ/ಮಗ/ಮಗಳು) ಒಟ್ಟು ಖಾಲಿ ಇರುವ ಹುದ್ದೆಗಳ ಪೈಕಿ ಶೇ.10 ರಷ್ಟು ಹುದ್ದೆಗಳು ಮೀಸಲಿಡಲಾಗಿದೆ. ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದೇ ಇದ್ದಲ್ಲಿ, ಸದರಿ ಹುದ್ದೆಗಳನ್ನು ಇತರೆ ವರ್ಗಗಳಿಂದ ಭರ್ತಿ ಮಾಡಲಾಗುವುದು.

V. ನೇರ ಪಾವತಿಯಡಿ ನೇಮಕಾತಿ ಮಾಡಿಕೊಳ್ಳುವ ಪದ್ಧತಿ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮದಲ್ಲಿ ಉಲ್ಲೇಖಿಸಿರುವುದಿಲ್ಲ. ಆದಕಾರಣ ನೇರಪಾವತಿ ನೇಮಕಾತಿ ಪ್ರಕ್ರಿಯೆಯು ಸದರಿ ಅಧಿನಿಯಮಕ್ಕೆ ಒಳ ಪಟ್ಟಿರುವುದಿಲ್ಲ ಮತ್ತು ಮೀಸಲಾತಿ ಅನ್ವಯಿಸುವುದಿಲ್ಲ.

VI. ಕಡಿಮೆ ವರ್ಷ ಸೇವೆ ಸಲ್ಲಿಸಿರುವುದಕ್ಕಿಂತ ಹೆಚ್ಚು ವರ್ಷ ಸೇವೆ ಸಲ್ಲಿಸಿದವರನ್ನು ಆದ್ಯತೆ ಮೇರೆಗೆ ಪರಿಗಣಿಸಲಾಗುವುದು.

VII. ಇಬ್ಬರು ಮತ್ತು ಹೆಚ್ಚಿನ ಅಭ್ಯರ್ಥಿಗಳ ಸೇವಾ ಅವಧಿಯು ಸಮನಾಗಿದ್ದಲ್ಲಿ, ಅಂತಹ ಸಂದರ್ಭದಲ್ಲಿ ಅಭ್ಯರ್ಥಿಗಳ ಆದ್ಯತಾ ಕ್ರಮವನ್ನು ವಯಸ್ಸಿನ ಆಧಾರದ ಮೇಲೆ ನಿಗದಿಪಡಿಸಲಾಗುವುದು, ಜನ್ಮ ದಿನಾಂಕ ಮತ್ತು ಸೇವೆಯ ದಿನಾಂಕ ಒಂದೇ ಆಗಿದ್ದಲ್ಲಿ ಲಾಟರಿ ಮೂಲಕ ಆಯ್ಕೆ ಮಾಡಲಾಗುವುದು.

For more job news visit : www.kpscvaani.com

VIII. ಸದರಿ ನೇರಪಾವತಿ ಪೌರಕಾರ್ಮಿಕರ ಹುದ್ದೆಗಳ ನೇಮಕಾತಿಯು ಸರ್ಕಾರ ಮತ್ತು ಪೌರಾಡಳಿತ ನಿರ್ದೇಶನಾಲಯದಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಸುತ್ತೋಲೆಗಳು, ಆದೇಶಗಳು ಮತ್ತು ನಿರ್ದೇಶನಗಳ ಷರತ್ತುಗಳಿಗೆ ಒಳಪಟ್ಟಿರುತ್ತದೆ.

4. ನೇಮಕಾತಿ ಷರತ್ತುಗಳು:

I. ನೇರ ಪಾವತಿಯಡಿ ಆಯ್ಕೆಗೊಂಡ ಅಭ್ಯರ್ಥಿಗೆ ಕಾರ್ಮಿಕ ಇಲಾಖೆಯು ಕಾಲ-ಕಾಲಕ್ಕೆ ಪರಿಷ್ಕರಿಸುವ ಕನಿಷ್ಠ ವೇತನವನ್ನು ಮತ್ತು PF, ESI ಸೌಲಭ್ಯ ಕಲ್ಪಿಸಲಾಗುವುದು.

II. ನೇರ ಪಾವತಿಯಡಿ ಆಯ್ಕೆಗೊಂಡ ಪೌರಕಾರ್ಮಿಕರು ತಾತ್ಕಾಲಿಕವಾಗಿದ್ದು ಖಾಯಂ ನೌಕರರಿಗೆ ನೀಡುವಂತಹ ಇತರೆ ಯಾವುದೇ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ ಮತ್ತು ವ್ಯಕ್ತಿಗತವಾಗಿ ಅಥವಾ ಸಂಘಗಳನ್ನು ಸ್ಥಾಪಿಸಿಕೊಂಡು ಖಾಯಂ ಮಾಡುವಂತೆ ಒತ್ತಾಯಿಸುವಂತಿಲ್ಲ ಹಾಗೂ ಖಾಯಂ ಮಾಡುವಂತೆ ಯಾವುದೇ ನ್ಯಾಯಾಲಯದ ಮೊರೆ ಹೋಗುವುದಕ್ಕೆ ಅಸ್ಪದವಿರುವುದಿಲ್ಲ. (ಈ ಕುರಿತು ಆಯ್ಕೆಗೊಂಡ ಅಭ್ಯರ್ಥಿಗಳು ನೋಟರಿ ಅಫೀಡಿವಿಟ್ ಕಡ್ಡಾಯವಾಗಿ ನೀಡತಕ್ಕದ್ದು ಮಾನ್ಯ ನಿರ್ದೇಶಕರು ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಇವರ ಸುತ್ತೋಲೆಯ ನಿರ್ದೇಶನದಂತೆ)

III. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು (ಈ ಕುರಿತು ವೈದ್ಯಾಧಿಕಾರಿಗಳಿಂದ ವೈದ್ಯಕೀಯ ದೃಢೀಕರಣ ಪತ್ರ ನೀಡುವುದು).

IV. ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಆಯ್ಕೆ ಸಮಿತಿ ಕಾಯ್ದಿರಿಸಿಕೊಂಡಿದೆ ಮತ್ತು ಆಯ್ಕೆ ಸಮಿತಿ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

V. ನೇರಪಾವತಿಯಡಿ ಆಯ್ಕೆ ಹೊಂದುವವರು ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಮೃತರಾದಲ್ಲಿ ಅನುಕಂಪ ನೇಮಕಾತಿ ಪಿಂಚಣಿ ಉಪದಾನ ಇತ್ಯಾದಿ ಯಾವುದೇ ಸೇವಾ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ.

VI. ನೇರ ಪಾವತಿ ಅಡಿ ಆಯ್ಕೆ ಹೊಂದುವ ಪೌರಕಾರ್ಮಿಕರು ಸ್ವಚ್ಛತಾ ಕೆಲಸವನ್ನೇ ನಿರ್ವಹಿಸಬೇಕು ಅದಲ್ಲದೆ ಇತರೆ ಯಾವುದೇ ಕೆಲಸಕ್ಕೆ ಅಥವಾ ಕಚೇರಿ ಕೆಲಸಗಳಿಗೆ ನಿಯೋಜಿಸುವಂತೆ ಕೋರುವಂತಿಲ್ಲ.

VII. ನೇರ ಪಾವತಿಯಡಿ ಆಯ್ಕೆಗೊಂಡವರುಗಳ ಹೊರತು ಸದರಿಯವರ ಹೆಸರಿನಲ್ಲಿ ಯಾವುದೇ ಸಂದರ್ಭದಲ್ಲಿಯೂ ಬೇರೊಬ್ಬರು ಕರ್ತವ್ಯ ನಿರ್ವಹಿಸುವಂತಿಲ್ಲ.

VIII. ನೇರ ಪಾವತಿಯಡಿ ಆಯ್ಕೆಗೊಂಡವರು ಕರ್ತವ್ಯ ನಿರ್ವಹಣೆಯಲ್ಲಿ ವಿಫಲರಾದಲ್ಲಿ ಅಥವಾ ಕಚೇರಿ ಮುಖ್ಯಸ್ಥರು ನೀಡುವ ಸೂಚನೆ ಮತ್ತು ಸಲಹೆಗಳನ್ನು ಪಾಲಿಸದೆ ಇದ್ದಲ್ಲಿ ಅಥವಾ ಸುಳ್ಳು ಮಾಹಿತಿ ಮತ್ತು ದಾಖಲೆ ನೀಡಿದ್ದು ಕಂಡುಬಂದಲ್ಲಿ ಮಹಾನಗರ ಪಾಲಿಕೆಯ ಆಯುಕ್ತರು ಇವರು ಯಾವುದೇ ಮುನ್ಸೂಚನೆ ನೀಡದೆ ಸದರಿಯವರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಸುವ ಅಧಿಕಾರ ಹೊಂದಿರುತ್ತಾರೆ.

IX. ಸರ್ಕಾರದಿಂದ ಹೊರಡಿಸಲಾದ ಸುತ್ತೋಲೆಯಲ್ಲಿ ನೀಡಿದ ನಿರ್ದೇಶನದಂತೆ ನೇರ ಪಾವತಿ ನೇಮಕಾತಿಯ ವೇತನ ಭರಿಸುವ ಷರತ್ತು ಒಳಗೊಂಡಿರುತ್ತದೆ.

For more job news visit : www.kpscvaani.com

6) ವಿಶೇಷ ಷರತ್ತುಗಳು:

I. ಈ ಸಾರ್ವಜನಿಕ ಪ್ರಕಟಣೆಯು ನೇಮಕಾತಿ ಆದೇಶವಾಗಿರುವುದಿಲ್ಲ.

II. ಶುಲ್ಕ ಭರಿಸಿ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ನೇರಪಾವತಿಗೆ ಆಯ್ಕೆಯಾಗಿರುವುದಾಗಿ ಭಾವಿಸತಕ್ಕದಲ್ಲ.

III. ಆಯ್ಕೆ ಸಂದರ್ಭದಲ್ಲಿ ಹೆಚ್ಚಿನ ದಾಖಲೆಗಳು ಅವಶ್ಯಕ ಎಂದು ಕಂಡುಬಂದಲ್ಲಿ ಆಯ್ಕೆ ಸಮಿತಿಗೆ ದಾಖಲೆಗಳು ಪೂರೈಸತಕ್ಕದ್ದು.

IV. ಪೌರಕಾರ್ಮಿಕರ ನೇರಪಾವತಿ ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇರಪಾವತಿ ಪೌರಕಾರ್ಮಿಕರ ನೇಮಕಾತಿ ಆಯ್ಕೆ ಸಮಿತಿ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ, ವಿಜಯಪುರ ರವರು ಕಾಯ್ದಿರಿಸಿಕೊಂಡಿರುತ್ತಾರೆ.

(ಡಾ. ಆನಂದ.ಕೆ. ಭಾಆಸೇ)
ಅಧ್ಯಕ್ಷರು,
ನೇರ ಪಾವತಿ ಪೌರಕಾರ್ಮಿಕರ ನೇಮಕಾತಿ ಆಯ್ಕೆ ಸಮಿತಿ ಹಾಗೂ ಜಿಲ್ಲಾಧಿಕಾರಿಗಳು,
ವಿಜಯಪುರ ಜಿಲ್ಲೆ.

ಪ್ರತಿ ಗೌರವಗಳೊಂದಿಗೆ:

1) ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ಬೆಂಗಳೂರು.
2) ಮಾನ್ಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು.

ಪ್ರತಿ ಸೂಕ್ತ ಕ್ರಮಕ್ಕಾಗಿ:

1) ಆಯುಕ್ತರು ಮಹಾನಗರ ಪಾಲಿಕೆ ವಿಜಯಪುರ.